ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿಇ/ಶೈಶಾ/ವಾ.ಶೈ.ಚ/2021-22 ದಿನಾಂಕ:15.06.2021

## ಸುತ್ತೋಲೆ

ವಿಷಯ: 2021-22ನೇ ಸಾಲಿಗೆ ಪ್ರಥಮ ಹಾಗೂ ದ್ವಿತೀಯ ಪಿಯುಸಿ ತರಗತಿಗಳ ಶೈಕ್ಷಣಿಕ ಚಟುವಟಿಕೆಗಳನ್ನು ಆರಂಭಿಸುವ ಸಂಬಂಧ ತಾತ್ಕಾಲಿಕ ವೇಳಾಪಟ್ಟಿಯ ಕುರಿತು.

ಉಲ್ಲೇಖ: ಏಕಕಡತ ಸಂಖ್ಯೆ: ಪಪೂಶಿಇ/ಶೈಶಾ/ಶೈ.ವೇ.ಪ/2020-21 ದಿನಾಂಕ: 14-06-2021

**********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕೋವಿಡ್-19 ರ ಹಿನ್ನೆಲೆಯಲ್ಲಿ 2021-22ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳಲ್ಲಿ ವ್ಯತ್ಯಯವಾಗುತ್ತಿದ್ದು, ಈ ಸಂಬಂಧ ಪ್ರಸಕ್ತ ಸಾಲಿನ ವಾರ್ಷಿಕ ಕಾರ್ಯಸೂಚಿ ವೇಳಾಪಟ್ಟಿ(ತಾತ್ಕಾಲಿಕ)ಯನ್ನು ಸಿದ್ದಪಡಿಸಿದ್ದು, ಶೈಕ್ಷಣಿಕ ಚಟುವಟಿಕೆಗಳ ವೇಳಾಪಟ್ಟಿಯು ಈ ಕೆಳಕಂಡಂತಿದೆ.

### 2021-22 ನೇ ಸಾಲಿನ ಶೈಕ್ಷಣಿಕ ಅವಧಿಯ ವೇಳಾಪಟ್ಟಿ

| | |
|---|---|
| ದಿನಾಂಕ: 15-07-2021 | - ಪ್ರಥಮ ಪಿಯುಸಿ ತರಗತಿಗಳು ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಪ್ರಕಟಗೊಂಡ ನಂತರ. |
| | - ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ 15-07-2021 ರಿಂದ ಆನ್‌ಲೈನ್ ತರಗತಿಗಳು ಪ್ರಾರಂಭ. |
| ದಿನಾಂಕ: 30-04-2022 | ಬೇಸಿಗೆ ರಜೆ |

### ಪ್ರಥಮ ಹಾಗೂ ದ್ವಿತೀಯ ಪಿಯುಸಿ ದಾಖಲಾತಿ ವೇಳಾಪಟ್ಟಿ.

| ತರಗತಿ | ದಂಡ ಶುಲ್ಕವಿಲ್ಲದಂತೆ ದಾಖಲಾತಿಗೆ ಕೊನೆಯ ದಿನಾಂಕ: | ವಿಳಂಬ ದಾಖಲಾತಿ ರೂ.670/- ರೂ.ಗಳೊಂದಿಗೆ | ವಿಶೇಷ ದಂಡ ಶುಲ್ಕ ರೂ.2890/- |
|---|---|---|---|
| ಪ್ರಥಮ ಪಿಯುಸಿ | ಎಸ್.ಎಸ್.ಎಲ್.ಸಿ ಫಲಿತಾಂಶ ಪ್ರಕಟವಾದ ನಂತರ ದಿನಾಂಕವನ್ನು ಪ್ರಕಟಿಸಲಾಗುವುದು | - | - |
| ದ್ವಿತೀಯ ಪಿಯುಸಿ | **15-07-2021 ರಿಂದ 13-08-2021** | **16-08-2021 ರಿಂದ 27-08-2021** | **30-08-2021 ರಿಂದ 09-09-2021** |

ಪ್ರಥಮ ಪಿಯುಸಿ ದಾಖಲಾತಿ ಪ್ರಕ್ರಿಯೆಯನ್ನು ಎಸ್.ಎಸ್.ಎಲ್.ಸಿ ಫಲಿತಾಂಶ ಪ್ರಕಟವಾದ ಒಂದು ವಾರದ ನಂತರ ಪ್ರಾರಂಭಿಸಲಾಗುವುದು. ಪ್ರಥಮ ಹಾಗೂ ದ್ವಿತೀಯ ಪಿಯುಸಿ ತರಗತಿಗಳಿಗೆ 2019-20 ಹಾಗೂ 2020-21 ನೇ ಸಾಲಿಗೆ ನಿಗಧಿ ಪಡಿಸಿದ ಶುಲ್ಕವನ್ನು ಸಂಗ್ರಹಿಸುವುದು.

ಕಳೆದ ಶೈಕ್ಷಣಿಕ ವರ್ಷದಲ್ಲಿ ಕೋವಿಡ್-19 ರ ಹಿನ್ನೆಲೆಯಲ್ಲಿ ದಿನಾಂಕ:01-01-2021 ರಿಂದ ಭೌತಿಕ ತರಗತಿಗಳನ್ನು ಆರಂಭಿಸಲಾಗಿತ್ತು. ಅವುಗಳಲ್ಲಿ ಸಕಾರಾತ್ಮಕವಾಗಿ ಪಾಲ್ಗೊಳ್ಳಲು ಸಾಧ್ಯವಾಗಿರುವುದಿಲ್ಲ ಹಾಗೂ

ಭೌತಿಕ ತರಗತಿಗಳು ನಡೆಯದಿರುವುದರಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅದರಲ್ಲೂ ವಿಶೇಷವಾಗಿ ಗ್ರಾಮೀಣ ಪ್ರದೇಶಗಳ ಕಲಿಕೆಯಲ್ಲಿ ಕೊರತೆ ಉಂಟಾಗಿರುತ್ತದೆ. ಈ ಹಿನ್ನೆಲೆಯಲ್ಲಿ 2021-22 ನೇ ಸಾಲಿಗೆ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರಿ-ರೆಕಾರ್ಡೆಡ್ ಯುಟ್ಯೂಬ್ ಮೂಲಕ ತರಗತಿಗಳನ್ನು ದಿನಾಂಕ: 15-07-2021 ರಿಂದ ಪ್ರಾರಂಭಿಸಲಾಗುವುದು.

ಮುಂದುವರೆದು ಭೌತಿಕ ತರಗತಿಗಳನ್ನು ಆರಂಭಿಸುವ ಕುರಿತು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು ಹಾಗೂ ಮೇಲ್ಕಂಡ ವೇಳಾಪಟ್ಟಿಯು ತಾತ್ಕಾಲಿಕವಾಗಿದ್ದು, ಸರ್ಕಾರವು ತೆಗೆದುಕೊಳ್ಳುವ ತೀರ್ಮಾನಗಳಿಗೆ ಅನ್ವಯಿಸಿ ವೇಳಾಪಟ್ಟಿಯನ್ನು ಬದಲಾವಣೆ ಮಾಡಲಾಗುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಇವರಿಗೆ.

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ. ಸೂಕ್ತ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು ಇ-ಆಡಳಿತ ವಿಭಾಗ – ಇಲಾಖೆ ಜಾಲತಾಣದಲ್ಲಿ ಅಳವಡಿಸಲು.

ಮಾಹಿತಿಗಾಗಿ

1. ಆಪ್ತಕಾರ್ಯದರ್ಶಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು. ಕೊಠಡಿ ಸಂಖ್ಯೆ 262. ವಿಧಾನಸೌಧ. ಬೆಂಗಳೂರು-01
2. ಆಪ್ತಕಾರ್ಯದರ್ಶಿಗಳು, ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು-01.
3. ಕಛೇರಿ ಪ್ರತಿ.